ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಮಾನ್ಯ ಸಭಾಧ್ಯಕ್ಷರು

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ    ದಿನಾಂಕ : DATE: 15/2/2020

# ವಿದ್ಯುನ್ಮಾನ ಮಾಧ್ಯಮಗಳಿಗೆ ನಿಷೇಧ ಮುಂದುವರಿಕೆ

- ಒಟ್ಟು 6 ವಿಧೇಯಕಗಳ ಮಂಡನೆ
- ಸೋಮವಾರದಿಂದ ಜಂಟಿ ಅಧಿವೇಶನ

ಬೆಂಗಳೂರು: ಮುಂದಿನ ಸೋಮವಾರದಿಂದ (ಫೆ,17) ಆರಂಭ ಆಗಲಿರುವ ವಿಧಾನಮಂಡಲದ ಬಜೆಟ್ ಅಧಿವೇಶನದಲ್ಲಿ ಈ ಬಾರಿಯೂ ವಿದ್ಯುನ್ಮಾನ ಮಾಧ್ಯಮಗಳಿಗೆ ಅವಕಾಶವಿಲ್ಲ.

ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಶುಕ್ರವಾರ ಈ ವಿಷಯ ಖಚಿತಪಡಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಕಲಾಪದ ವಿವರ ನೀಡಿದ ಅವರು ಪ್ರಶ್ನೆಗೆ ಪ್ರತಿಕ್ರಿಯಿಸಿ ರಾಜ್ಯಸಭೆ ಹಾಗೂ ಲೋಕಸಭೆ ಮಾದರಿಯಲ್ಲಿ ವಿದುನ್ಮಾನ ಮಾಧ್ಯಮಗಳನ್ನು ಪರಿಗಣಿಸಲಾಗುವುದು. ಆ ಎರಡೂ ಮನೆಗಳಲ್ಲಿ ಹಾಗೂ ಹಲವು ರಾಜ್ಯಗಳಲ್ಲಿ ಖಾಸಗಿ ವಿದ್ಯುನ್ಮಾನ ಮಾಧ್ಯಮಗಳಲ್ಲಿ ಕಲಾಪದ ವರದಿಗೆ ಅವಕಾಶವಿಲ್ಲ. ಆದರೆ ಅವರಿಗೆ ಕಲಾಪದ ದೃಶ್ಯಾವಳಿ ಒದಗಿಸಲಾಗುವುದು. ಈ ವಿಷಯದಲ್ಲಿ ಪಾರದರ್ಶಕತೆ ಪಾಲನೆ ಮಾಡಲಾಗುವುದು ಎಂದು ಹೇಳಿದರು.

ಮುಂದಿನ ಸೋಮವಾರ ಬೆಳಗ್ಗೆ 11 ಗಂಟೆಗೆ ರಾಜ್ಯಪಾಲ ವಜುಬಾಯಿವಾಲಾ ಜಂಟಿ ಅಧಿವೇಶನ ಉದ್ದೇಶಿಸಿ ಭಾಷಣ ಮಾಡಲಿದ್ದಾರೆ. ರಾಜ್ಯಪಾಲರ ಭಾಷಣದ ನಂತರ ಸಂತಾಪ ಸೂಚಕ ನಿರ್ಣಯ ಅಂಗೀಕಾರ ಮಾಡಲಾಗುವುದು. ಮಾರ್ಚ್ 1 ಮತ್ತು 2ರಂದು ಸಂವಿಧಾನದ ಮೇಲೆ ಚರ್ಚೆ ನಡೆಯಲಿದೆ. ಚರ್ಚೆಯ ಸ್ವರೂಪದ ಬಗ್ಗೆ ಸದನ ಸಲಹಾ ಸಮಿತಿ ಸಭೆಯಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಲಾಗುವುದು. ಮಾರ್ಚ್ 5ರಂದು ಬೆಳಗ್ಗೆ 11 ಗಂಟೆಗೆ ಮುಖ್ಯಮಂತ್ರಿ ಯಡಿಯೂರಪ್ಪ ಬಜೆಟ್ ಮಂಡನೆ ಮಾಡಲಿದ್ದಾರೆ. ಮಾರ್ಚ್ 31ರವೆಗೂ ಅಧಿವೇಶನ ನಡೆಯಲಿದೆ ಎಂದು ತಿಳಿಸಿದರು.



ಕರ್ನಾಟಕ ಲೋಕಾಯುಕ್ತ ತಿದ್ದುಪಡಿ ವಿಧೇಯಕ, ಕರ್ನಾಟಕ ನಾವಿನ್ಯತಾ ಪ್ರಾಧಿಕಾರ ವಿಧೇಯಕ, ಭಾರತ ರಾಷ್ಟ್ರೀಯ ಕಾನೂನು ಪ್ರಾಧಿಕಾರ ತಿದ್ದುಪಡಿ ವಿಧೇಯಕ, ಕರ್ನಾಟಕ ರಾಜ್ಯಭಾಷಾ ತಿದ್ದುಪಡಿ ವಿಧೇಯಕ, ಕರ್ನಾಟಕ ನಗರ ಪಾಲಿಕೆಗಳ ತಿದ್ದುಪಡಿ ವಿಧೇಯಕ, ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕ ತಿದ್ದುಪಡಿ ವಿಧೇಯಕ ಮಂಡನೆ ಆಗಲಿದೆ. ಕರ್ನಾಟಕ ಅನುಸೂಚಿತ ಜಾತಿಗಳು, ಅನಸೂಚಿತ ಬುಡಕಟ್ಟುಗಳು ಮತ್ತು ಇತರ ಹಿಂದುಳಿದ ವರ್ಗಗಳ ನೇಮಕಾತಿ, ಮೀಸಲಾತಿಗೆ ಸಂಬಂಧಿಸಿದ ತಿದ್ದುಪಡಿ ವಿಧೇಯಕವನ್ನು ಈಗಾಗಲೇ ಮಂಡಿಸಲಾಗಿದ್ದು ಅದು ಪರ್ಯಾಲೋಚನೆಗ ಬರಲಿದೆ ಎಂದು ಹೇಳಿದರು.

ವಿಧೇಯಕಗಳ ಬಗ್ಗೆ ವಿವರವಾದ ಚರ್ಚೆಗೆ ಅವಕಾಶ ಮಾಡಿಕೊಡುವುದಾಗಿ ತಿಳಿಸಿದರು.